ರಾಜ್ಯದಲ್ಲಿ ಅರಣ್ಯ ಭೂಮಿ ಸ್ವಾಧೀನ

1762 (2365) ಶ್ರೀ ಗೋಪಾಲ ಬಂಡಾರಿ ಹೆಚ್. (ಕಾರ್ಕಳ) ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವನ್ಯಜೀವಿ ವಿಭಾಗದ ಹತ್ತಿರವಿರುವ ಖಾಸಗಿ ಜಮೀನುಗಳನ್ನು ಸ್ವಾಧೀನಪಡಿಸಿಕೊಳ್ಳುವ ಯೋಜನೆ ಸರ್ಕಾರದ ಮುಂದೆ ಇದೆಯೇ;

ಆ) 1978ರ ಹಿಂದೆಯೇ ಅರಣ್ಯ ಜಮೀನಿನಲ್ಲಿ ಕೃಷಿ ಮಾಡಿಕೊಂಡಿರುವವರ ಪಟ್ಟಿಯಲ್ಲಿ ಅನೇಕ ರೈತರ ಹೆಸರು ಬಿಟ್ಟು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಿಟ್ಟು ಹೋದವರ ಹೆಸರನ್ನು ಪುನಃ ಸೇರಿಸಲಾಗುವುದೇ?

ಶ್ರೀ ಕೆ.ಹೆಚ್. ರಂಗನಾಥ್ (ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು)

ಅ) ಚಿಕ್ಕಮಗಳೂರು ವನ್ಯ ಜೀವಿ ವಿಭಾಗದ ಭದ್ರಾ ಅಭಯಾರಣ್ಯದ ಹತ್ತಿರ ಇರುವ ಖಾಸಗಿ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳುವ ಬಗ್ಗೆ ಒಂದು ಪ್ರಸ್ತಾವನೆಯು ಸರ್ಕಾರದಲ್ಲಿ ಸ್ವೀಕಾರವಾಗಿದೆ.

ಆ) ಬಂದಿರುತ್ತದೆ.

ಕೇಂದ್ರ ಸರ್ಕಾರ ,ಹಾಗೂ ರಾಜ್ಯ ಸರ್ಕಾರದ ಮಾರ್ಗ ಸೂಚಿಗಳಿಗೆ ಒಳಪಡುವ ಅರ್ಹ ಪ್ರಕರಣಗಳನ್ನು ಸೇರಿಸಲಾಗುವುದು.

ಸರ್ಕಾರಿ ಜಮೀನಿನಲ್ಲಿ ಅಕ್ರಮ ಕಟ್ಟಡಗಳ ಸಕ್ರಮ

1763 (1932) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಜಮೀನಿನಲ್ಲಿ ಕಟ್ಟಿರುವ ಅಕ್ರಮ ಕಟ್ಟಡಗಳನ್ನು ಸಕ್ರಮಗೊಳಿಸಲು ಸರ್ಕಾರಿ ಆದೇಶ ಮಾಡಿದ್ದರೂ ಕಂದಾಯ ಇಲಾಖೆ ಅಧಿಕಾರಿಗಳು ವಿಳಂಬ ಮಾಡುತ್ತಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದರೆ, ಅಕ್ರಮ ಕಟ್ಟಡಗಳನ್ನು ಸಕ್ರಮಗೊಳಿಸುವ ಕಾರ್ಯವನ್ನು ಶೀಘ್ರವಾಗಿ ಬಿಲ್‌ಮಾಡಲು ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು)

ಅ) - ಇಲ್ಲ -

ಆ) ಸರ್ಕಾರ ಜಮೀನುಗಳಲ್ಲಿ ಅನಧಿಕೃತವಾಗಿ ನಿರ್ಮಿಸಿಕೊಂಡಿರುವ ಮನೆಗಳ ಸಕ್ರಮೀಕರಣಕ್ಕಾಗಿ ಅರ್ಜಿ ಹಾಕಿಕೊಳ್ಳಲು ದಿನಾಂಕ: 25.9.2000 ಕೊನೆಯ ದಿನಾಂಕವಾಗಿತ್ತು. ಸಾರ್ವಜನಿಕ ಹಿತದೃಷ್ಟಿಯಿಂದ ಅರ್ಜಿ ಸಲ್ಲಿಸುವ ಕಾಲಾವಧಿಯನ್ನು ದಿನಾಂಕ: 01.1.2002 ರವರೆಗೆ ವಿಸ್ತರಿಸಲಾಯಿತು. ಈ ಕಾಲಾವಧಿಯಲ್ಲಿ ಸ್ವೀಕೃತಗೊಂಡ ಅರ್ಜಿಗಳನ್ನೊಳಗೊಂಡಂತೆ ಎಲ್ಲಾ ಅರ್ಜಿಗಳನ್ನು ಶೀಘ್ರವಾಗಿ ವಿಲೆಗೊಳಿಸಲು ಅಗತ್ಯ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗುವುದು.